56

**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಐವನ್ ಡಿ'ಸೋಜಾ ಇವರ**
**ನಿಯಮ-72ರಡಿ ಗಮನ ಸೆಳೆಯುವ ಸೂಚನೆಗೆ ಉತ್ತರ**

**ವಿಷಯ:** ಮಂಗಳೂರು ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ವಕೀಲರ ಭವನ ನಿರ್ಮಾಣಕ್ಕೆ ಸ್ಥಳವನ್ನು ಕಾಯ್ದಿರಿಸಲಾಗಿದ್ದು, ಇಲಾಖೆಯಿಂದ ಈ ಬಗ್ಗೆ ಅನುದಾನವನ್ನು ಒದಗಿಸದೇ ಈ ಭವನ ಸ್ಥಾಪನೆಗೆ ತೊಂದರೆ ಉಂಟಾಗಿದ್ದು, ಈ ಬಗ್ಗೆ ಇಲಾಖೆ ಕೈಗೊಂಡಿರುವ ಕ್ರಮದ ಬಗ್ಗೆ.

* * * * *

ಮಂಗಳೂರು ಜಿಲ್ಲಾ ನ್ಯಾಯಾಲಯದ ಆವರಣದಲ್ಲಿ ವಕೀಲರ ಭವನದ ನಿರ್ಮಾಣದ ಬಗ್ಗೆ ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು ತಾಲ್ಲೂಕು, ಕೋಡಿಯಾಲ್ ಬೈಲ್ ಎ ಗ್ರಾಮದ ಸರ್ವೆ ನಂಬರ್: 205/1ಎ1 ರಲ್ಲಿ 0.25 ಎಕರೆ ಜಮೀನನ್ನು ಹಾಗೂ 205/1ಬಿ ದಲ್ಲಿ 0.12 ಎಕರೆ ಸರ್ಕಾರಿ ಜಮೀನನ್ನು ನ್ಯಾಯಾಂಗ ಇಲಾಖೆಗೆ ಕಾಯ್ದಿರಿಸಿ ಸಹಾಯಕ ಆಯುಕ್ತರು, ಮಂಗಳೂರು ಉಪ ವಿಭಾಗ, ಮಂಗಳೂರು ಇವರ ಮಂಜೂರಾತಿ ಆದೇಶದ ವಿರುದ್ಧ ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಮಂಗಳೂರು ಇವರು ಸದ್ರಿ ಮಂಜೂರಾತಿ ಆದೇಶವನ್ನು ರದ್ದುಗೊಳಿಸಬೇಕೆಂದು ಸಲ್ಲಿಸಿದ ತಕರಾರು ಅರ್ಜಿ ಬಾಕಿ ಇರುವುದರಿಂದ ಸದ್ರಿ ನಿವೇಶನದಲ್ಲಿ ವಕೀಲರ ಭವನ ನಿರ್ಮಾಣ ಯೋಜನೆಯನ್ನು ಕೈಬಿಟ್ಟು ಬದಲಿ ಸಾಧ್ಯತೆಗಳ ಬಗ್ಗೆ ಪರಿಶೀಲಿಸಬಹುದೆಂದು ಸೂಚಿಸಿ ಅಧ್ಯಕ್ಷರು, ಮಂಗಳೂರು ವಕೀಲರ ಸಂಘ ಇವರು ದಿನಾಂಕ 25-09-2019 ರಂದು ಮನವಿ ಸಲ್ಲಿಸಿರುತ್ತಾರೆ.

ಅಧ್ಯಕ್ಷರು, ಮಂಗಳೂರು ವಕೀಲರ ಸಂಘ ಇವರ ಮನವಿಯ ಮೇರೆಗೆ ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶದಂತೆ ಮಂಗಳೂರು ವಕೀಲರ ಭವನದ ನಿರ್ಮಾಣದ ಕುರಿತು ಬದಲಿ ಸಾಧ್ಯತೆಗಳ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಮುಂದುವರೆದಂತೆ, ಈಗಾಗಲೇ ಸರ್ಕಾರವು ಮಂಗಳೂರು ಜಿಲ್ಲೆಯ ವಕೀಲರ ಭವನ ನಿರ್ಮಾಣ ಕಾಮಗಾರಿಗಾಗಿ ರೂ. 500.00 ಲಕ್ಷಗಳನ್ನು ಅಪೆಂಡಿಕ್ಸ್-ಇ 2017-18 ನೇ ಸಾಲಿನ ಲೆಕ್ಕ ಶೀರ್ಷಿಕೆಯಲ್ಲಿ ಸೇರ್ಪಡೆ ಮಾಡಿರುತ್ತದೆ.

(ಜೆ.ಸಿ.ಮಾಧುಸ್ವಾಮಿ)
ಕಾನೂನು, ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಹಾಗೂ ಸಣ್ಣ ನೀರಾವರಿ ಸಚಿವರು

ಸಂಖ್ಯೆ: ಲಾ-ಎಲ್ಎಡಿ/43/2020